**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಶೈ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2015/2015-16

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ:21-12-2015.

**2015ರ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಅರ್ಜಿಗಳನ್ನು Forward ಮಾಡಲು ದಿನಾಂಕ ವಿಸ್ತರಣೆ ಕುರಿತು**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2015ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 80th Percentile ಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of Scholorship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:**www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2015ರ Fresh Batchನ ವಿದ್ಯಾರ್ಥಿಗಳು ಮಾತ್ರ ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಈಗಾಗಲೇ ತಿಳಿಸಲಾಗಿರುತ್ತದೆ.**

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಸಲ್ಲಿಸಲು **ದಿನಾಂಕ:30-11-2015** ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು. ಆದಾಕರಣ, ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಮಯ ಈಗಾಗಲೇ ಮುಕ್ತಾಯವಾಗಿರುತ್ತದೆ.

ಅಂತೆಯೇ, ಪ್ರಾಚಾರ್ಯರುಗಳು, **"online" ಮೂಲಕ** ವಿದ್ಯಾರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ಆತನು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ** ಇಲಾಖೆಗೆ **ದಿನಾಂಕ:30-11-2015ರ** ಒಳಗೆ ಸಲ್ಲಿಸುವಂತೆ**( Forward ಮಾಡುವಂತೆ)** ಕೋರಲಾಗಿತ್ತು. ಅನೇಕ ಕಾಲೇಜುಗಳು ಹಾಗೂ ಸಂಸ್ಥೆಯವರುಗಳು ವಿದ್ಯಾರ್ಥಿಗಳ ಅರ್ಜಿಗಳನ್ನು **Forward ಮಾಡುವಲ್ಲಿ** ಸಾಕಷ್ಟು ಸಮಸ್ಯೆಗಳುಂಟಾಗಿರುವ ಕಾರಣ ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಪ್ರಾಂಶುಪಾಲರುಗಳಿಗೆ ಅರ್ಜಿಗಳನ್ನು **"online" ಮೂಲಕ Forward ಮಾಡಲು** ಕೊನೆಯ ದಿನಾಂಕವನ್ನು **ದಿನಾಂಕ:10-01-2016 ರವರೆಗೆ** ವಿಸ್ತರಿಸಲಾಗಿದೆ.

21/12/15
ನೋಡಲ್ ಅಧಿಕಾರಿಗಳು,
ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ,
ಪದವಿ ಪೂರ್ವ ಶಿಕ್ಷಣ ಇಲಾಖೆ.

**NOTE: DEPARTMENT OF HIGHER EDUCATION:**

**ForStudents:**

**Online application registrations by the students for CENTRAL SECTOR SCHEME OF SCHOLARSHIPS FOR COLLEGE AND UNIVERSITY STUDENTS is closed on 30th November 2015.**

**For Institutions:**

**The last date for verification of application by the College /Universities/Institutions may be extended up to 10.01.2016. In the absence of User ID and Password by the Institutes, Institutes may be asked to approach the State Nodal Officer first or Help desk at Department of Higher Education [cssmhrd2015@gmail.com] by way of sending an e-mail request**